**All India Radio: Bangalore**
**Regional Bulletin In Kannada**
**06.07.2025 / 2.30 p.m.**

**ಆಕಾಶವಾಣಿ ಬೆಂಗಳೂರು**

**ಪ್ರದೇಶ ಸಮಾಚಾರ**

**<><><><>**

ಮುಖ್ಯಾಂಶಗಳು :

೧. ಹಾಸನ ಹೃದಯಾಘಾತ ಪ್ರಕರಣ - ಮಕ್ಕಳಿಗೂ ಆರೋಗ್ಯ ತಪಾಸಣೆಗೆ ಸಚಿವ ರಾಜಣ್ಣ ಸೂಚನೆ

೨. ಎಐಸಿಸಿ ಹಿಂದುಳಿದ ವರ್ಗಗಳ ರಾಷ್ಟ್ರೀಯ ಸಲಹಾ ಮಂಡಳಿ ಅಧ್ಯಕ್ಷರಾಗಿ ಮುಖ್ಯಮಂತ್ರಿ ನೇಮಕ - ಇದೇ ೧೫ರಂದು ಬೆಂಗಳೂರಿನಲ್ಲಿ ಸಭೆ

೩. ಮುಖ್ಯಮಂತ್ರಿ ರಾಜೀನಾಮೆ ನೀಡುವ ಕಾಲ ಸನ್ನಿಹಿತ - ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ

೪. ವರದಾ ಬೇಡ್ತಿ ನದಿಗಳ ಜೋಡಣೆಗೆ ಕೇಂದ್ರದಿಂದ ಸಹಕಾರ - ಸಚಿವ ಪ್ರಹ್ಲಾದ್ ಜೋಶಿ ಭರವಸೆ

೫. ದೇಶಾದ್ಯಂತ ಇಂದು ಹಸಿರು ಕ್ರಾಂತಿಯ ಹರಿಕಾರ ಡಾ.ಬಾಬು ಜಗಜೀವನ್ ರಾಮ್ ೩೯ನೇ ಪುಣ್ಯಸ್ಮರಣೆ

><><><><><><><><><><><

ಹೃದಯಾಘಾತ ಪ್ರಕರಣಗಳನ್ನು ಗಂಭೀರವಾಗಿ ಪರಿಗಣಿಸಿರುವ ರಾಜ್ಯಸರ್ಕಾರ ಪ್ರತೀ ವರ್ಷ ಎಲ್ಲಾ ಜಿಲ್ಲೆಗಳಲ್ಲಿ ಬಾಲ್ಯದಿಂದಲೇ ಹೃದಯದ ಆರೋಗ್ಯ ತಪಾಸಣೆಗೆ ಯೋಜನೆ ರೂಪಿಸಲಾಗಿದೆ ಎಂದು ಸಹಕಾರಿ ಸಚಿವ ಕೆ.ಎನ್.ರಾಜಣ್ಣ ತಿಳಿಸಿದ್ದಾರೆ. ಹಾಸನದಲ್ಲಿ ಹೃದಯಾಘಾತ ಪ್ರಕರಣಗಳ ವಾಸ್ತವಾಂಶ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು ಹೃದ್ರೋಗ ತಜ್ಞರ ವರದಿ ಬಳಿಕ ಮುಂದಿನ ಕ್ರಮದ ಬಗ್ಗೆ ಸರ್ಕಾರ ತೀರ್ಮಾನ ಕೈಗೊಳ್ಳಲಿದೆ ಎಂದು ಸ್ಪಷ್ಟಪಡಿಸಿದ್ದಾರೆ. ಹೃದಯಾಘಾತ ಸಂಭವಿಸಲು ಆಹಾರ ಪದ್ಧತಿಯ ಬದಲಾವಣೆ, ಬದಲಾದ ಜೀವನ ಶೈಲಿ, ವಂಶ ಪಾರಂಪಾರ್ಯ ಹೀಗೆ ಹತ್ತು ಹಲವು ಕಾರಣಗಳಿ. ಹೃದಯಾಘಾತದಿಂದ ವ್ಯಕ್ತಿ ಸಾವನ್ನಪ್ಪಿರುವ ಬಗ್ಗೆ ಖಚಿತ ಮಾಹಿತಿ ಪಡೆಯಲು ಮರಣೋತ್ತರ ಪರೀಕ್ಷೆ ಮಾಡಬೇಕು ಎಂದು ಆರೋಗ್ಯ ಇಲಾಖೆ ಅಧಿಕಾರಿಗಳಿಗೆ ಸೂಚನೆ ನೀಡಿದ್ದಾರೆ. ಇನ್ನೊಂದು ವಾರದ ಒಳಗಾಗಿ ಹಾಸನ ಜಿಲ್ಲೆಗೆ ಹೆಚ್ಚುವರಿ ಹೃದ್ರೋಗ ತಜ್ಞ ವೈದ್ಯರ ನೇಮಕಾತಿಗೆ ಕ್ರಮ ವಹಿಸಲಾಗುವುದು.

ಹೃದಯಾಘಾತಕ್ಕೆ ಕೋವಿಡ್ ಲಸಿಕೆ ಕಾರಣ ಅಲ್ಲ ಎಂಬುದು ಈಗಾಗಲೇ ಸಾಬೀತಾಗಿದ್ದು, ಇದರ ಬಗ್ಗೆ ಜನರಲ್ಲಿ ಗೊಂದಲ ಬೇಡ ಎಂದು ಹೇಳಿದ್ದಾರೆ.

**ಧ್ವನಿ : ಕೆ.ಎನ್ ರಾಜಣ್ಣ, ಜಿಲ್ಲಾ ಉಸ್ತುವಾರಿ ಸಚಿವ ( 29 ಸೆಕೆಂಡುಗಳು)**

><><><><><><><

ಎಐಸಿಸಿ ಹಿಂದುಳಿದ ವರ್ಗಗಳ ರಾಷ್ಟ್ರೀಯ ಸಲಹಾ ಮಂಡಳಿ ಅಧ್ಯಕ್ಷರನ್ನಾಗಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರನ್ನು ನೇಮಕ ಮಾಡಲಾಗಿದೆ. ಮಂಡಳಿಯ ಚಟುವಟಿಕೆಗಳನ್ನು ಕರ್ನಾಟಕದಿಂದಲೇ ಆರಂಭಿಸಲು ಎಐಸಿಸಿ ನಿರ್ಧರಿಸಿದ್ದು, ಇದೇ ಜುಲೈ ೧೫ರಂದು ಬೆಂಗಳೂರಿನಲ್ಲಿ ಮೊದಲ ಸಭೆ ಹಮ್ಮಿಕೊಳ್ಳಲಾಗಿದೆ. ಬೆಂಗಳೂರಿನ ಕ್ವೀನ್ಸ್ ರಸ್ತೆಯಲ್ಲಿರುವ ಕೆಪಿಸಿಸಿ ಕಚೇರಿ ಆವರಣದಲ್ಲಿನ ಭಾರತ್ ಜೋಡೊ ಭವನದಲ್ಲಿ ಮಂಡಳಿಯ ಮೊದಲ ಸಭೆ ನಡೆಯಲಿದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದ್ದಾರೆ.

**ಧ್ವನಿ : ಮುಖ್ಯಮಂತ್ರಿ ಸಿದ್ದರಾಮಯ್ಯ( 26 ಸೆಕೆಂಡುಗಳು)**

ಮಂಡಳಿಯ ಸದಸ್ಯರು, ಸಂಚಾಲಕರು, ಕಾರ್ಯದರ್ಶಿಗಳು, ಕಾಂಗ್ರೆಸ್‌ನ ಹಿಂದುಳಿದ ವರ್ಗಗಳ ಪ್ರಮುಖ ನಾಯಕರು ಸೇರಿದಂತೆ ದೇಶದ ವಿವಿಧ ರಾಜ್ಯಗಳ ೬೦ ನಾಯಕರಿಗೆ ಸಭೆಯಲ್ಲಿ ಪಾಲ್ಗೊಳ್ಳಲು ಆಹ್ವಾನ ನೀಡಲಾಗಿದೆ. ಈ ಪೈಕಿ ಐವರು ಮಾಜಿ ಸಿಎಂಗಳು, ೧೦ ಮಂದಿ ಕೇಂದ್ರದ ಮಾಜಿ ಸಚಿವರೂ ಪಾಲ್ಗೊಳ್ಳಲಿದ್ದಾರೆ.

><><><><><><><

ಮುಖ್ಯಮಂತ್ರಿ ಸಿದ್ದರಾಮಯ್ಯ ರಾಜೀನಾಮೆ ನೀಡುವ ಕಾಲ ಸನ್ನಿಹಿತವಾಗಿದೆ ಎಂದು ಬಿಜೆಪಿ ರಾಜ್ಯಾಧ್ಯಕ್ಷ ಬಿ ವೈ ವಿಜಯೇಂದ್ರ ತಿಳಿಸಿದ್ದಾರೆ. ಮೈಸೂರಿನಲ್ಲಿಂದು , ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ರಾಜ್ಯದಲ್ಲಿ ಅಭಿವೃದ್ಧಿ ಕೆಲಸವಾಗದೆ ಭ್ರಷ್ಟಾಚಾರ ತಾಂಡವವಾಡುತ್ತಿದೆ ಎಂದು ಆರೋಪಿಸಿದ್ದಾರೆ. ಸಿದ್ದರಾಮಯ್ಯನವರನ್ನು ಅಖಿಲ ಭಾರತ ಹಿಂದುಳಿದ ವರ್ಗಗಳ ರಾಷ್ಟ್ರೀಯ ಸಲಹಾ ಮಂಡಳಿಯ ಅಧ್ಯಕ್ಷರನ್ನಾಗಿ ಮಾಡಿ ದೆಹಲಿಗೆ ಕಳುಹಿಸಲು ಮುಂದಾಗಿದ್ದಾರೆ. ಈ ಹಿನ್ನೆಲೆಯಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯನವರ ಸ್ಥಾನಪಲ್ಲಟ ನಿಶ್ಚಿತ ಎಂದು ಹೇಳಿದ್ದಾರೆ.

><><><><><><><

ವರದಾ ಮತ್ತು ಬೇಡ್ತಿ ನದಿಗಳ ಜೋಡಣೆಗೆ ರಾಜ್ಯ ಸರ್ಕಾರ ಡಿಪಿಆರ್ ತಯಾರಿಸಿ, ಸಚಿವ ಸಂಪುಟದ ಅನುಮೋದನೆ ಪಡೆದರೆ ಕೇಂದ್ರದಿಂದ ಸಹಕಾರ ನೀಡಲಾಗುವುದು ಎಂದು ಹೊಸ ಮತ್ತು ನವೀಕರಿಸಬಹುದಾದ ಇಂಧನ ಸಚಿವ ಪ್ರಹ್ಲಾದ್ ಜೋಶಿ ತಿಳಿಸಿದ್ದಾರೆ. ಹಾವೇರಿಯಲ್ಲಿ

ಮಾತನಾಡಿದ ಅವರು, ಶಿಗ್ಗಾಂವಿ-ಸವಣೂರು ವಿಧಾನಸಭಾ ಕ್ಷೇತ್ರಕ್ಕೆ ಆಯುಷ್ಮಾನ್ ಆರೋಗ್ಯ ಕೇಂದ್ರ ಯೋಜನೆಯಡಿ ೪೬ ಆರೋಗ್ಯ ಕೇಂದ್ರಗಳಿಗೆ ತಲಾ ೫೫ ಲಕ್ಷ ರೂಪಾಯಿ ಅನುದಾನ ಬಿಡುಗಡೆಗೊಳಿಸಲಾಗಿದೆ ಎಂದು ಹೇಳಿದ್ದಾರೆ. ಗ್ರಾಮೀಣ ಪ್ರದೇಶಗಳ ಜನರಿಗೆ ಪ್ರಾಥಮಿಕ ಹಂತದ ಆರೋಗ್ಯ ಸೇವೆ ನೀಡುವ ಉದ್ದೇಶದಿಂದ ಆರೋಗ್ಯ ಮತ್ತು ಕ್ಷೇಮ ಕೇಂದ್ರಗಳನ್ನು ಸರ್ಕಾರ ಸ್ಥಾಪಿಸಲಾಗುತ್ತಿದೆ ಎಂದು ಸ್ಪಷ್ಟಪಡಿಸಿದ್ದಾರೆ.

><><><><><><><><><><

ದೇಶಾದ್ಯಂತ ಇಂದು ಹಸಿರು ಕ್ರಾಂತಿಯ ಹರಿಕಾರ ಮಾಜಿ ಉಪ ಪ್ರಧಾನಿ ಡಾ.ಬಾಬು ಜಗಜೀವನ್ ರಾಂ ಅವರ ೩೮ನೇ ಪುಣ್ಯಸ್ಮರಣೆ ಆಚರಿಸಲಾಗುತ್ತಿದೆ. ಮುಖ್ಯಮಂತ್ರಿ ಸಿದ್ದರಾಮಯ್ಯ ವಿಧಾನಸೌಧದ ಬಳಿ ಅವರ ಪ್ರತಿಮೆಗೆ ಮಾಲಾರ್ಪಣೆ ಮಾಡಿದರು. ಈ ವೇಳೆ ಸಮಾಜ ಕಲ್ಯಾಣ ಇಲಾಖೆ ಸಚಿವ ಮಹದೇವಪ್ಪ ಸೇರಿ ಹಲವು ಗಣ್ಯರು ಉಪಸ್ಥಿತರಿದ್ದರು. ಬೆಂಗಳೂರು ಗ್ರಾಮಾಂತರ ಜಿಲ್ಲೆಯ ದೊಡ್ಡಬಳ್ಳಾಪುರದಲ್ಲಿ ನಗರಸಭೆ ವತಿಯಿಂದ ಹಸಿರು ಕ್ರಾಂತಿಯ ಹರಿಕಾರ, ಹಾಗೂ ಭಾರತದ ಮಾಜಿ ಉಪ ಪ್ರಧಾನಮಂತ್ರಿ ಡಾ.ಬಾಬು ಜಗಜೀವನ ರಾಂ ಅವರ ೩೯ ನೇ ಪುಣ್ಯಸ್ಮರಣೆಯನ್ನು  ಆಚರಿಸಲಾಯಿತು. ಹಸಿರು ಕ್ರಾಂತಿಯ ಹರಿಕಾರ ಡಾ. ಬಾಬು ಜಗಜೀವನ್ ರಾಮ್ ರವರ ೩೯ನೇ ಪುಣ್ಯಸ್ಮರಣೆ ಕಾರ್ಯಕ್ರಮವನ್ನ ಮೈಸೂರಿನಲ್ಲಿ ಆಚರಿಸಲಾಯಿತು. ರೈಲ್ವೆ ನಿಲ್ದಾಣ ವೃತ್ತದಲ್ಲಿರುವ ಡಾ. ಬಾಬು ಜಗಜೀವನ್ ರಾಮ್ ಪುತ್ತಳಿಗೆ ವಿಧಾನಪರಿಷತ್ ಸದಸ್ಯ ಡಾ. ಡಿ. ತಿಮ್ಮಯ್ಯ ಪುಷ್ಪಾರ್ಚನೆ ಮಾಡುವ ಮುಖಾಂತರ ಪುಣ್ಯ ಸ್ಮರಣೆ ಕಾರ್ಯಕ್ರಮಕ್ಕೆ ಚಾಲನೆ ನೀಡಿದರು. ಡಾ.ಬಾಬು ಜಗಜೀವನರಾಮ್ ಸ್ವಾತಂತ್ರ್ಯ ಹೋರಾಟಗಾರರಾಗಿ, ತಳ ಸಮುದಾಯಗಳ ದನಿಯಾಗಿ, ಮೇರು ವ್ಯಕ್ತಿತ್ವದ ನೇತಾರ ಎಂದು ಚಿಕ್ಕಬಳ್ಳಾಪುರ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯ ನಿರ್ವಾಹಕ ಅಧಿಕಾರಿ ಡಾ.ವೈ.ನವೀನ್ ಭಟ್ ತಿಳಿಸಿದ್ದಾರೆ. ಬಾಬು ಜಗಜೀವನ್ ರಾಂ ಅವರ ಆದರ್ಶಗಳನ್ನು ಪ್ರತಿಯೊಬ್ಬರೂ ತಮ್ಮ ಬದುಕಿನಲ್ಲಿ ಅಳವಡಿಸಿಕೊಳ್ಳಬೇಕು ಎಂದು ಕೊಡಗು ಜಿಲ್ಲಾಧಿಕಾರಿ ವೆಂಕಟ್ ರಾಜಾ ಕರೆ ನೀಡಿದರು.

><><><><><><><><><><

ರಾಜ್ಯದೆಲ್ಲೆಡೆ ಇಂದು ತ್ಯಾಗ ಬಲಿದಾನದ ಸಂಕೇತವಾದ ಮೊಹರಂ ಹಬ್ಬವನ್ನು  ಮುಸ್ಲಿಂ ಬಾಂಧವರು ಶ್ರದ್ಧಾಭಕ್ತಿಯಿಂದ  ಆಚರಿಸುತ್ತಿದ್ದಾರೆ. ಜಾತಿ, ಧರ್ಮಗಳನ್ನು ಮೀರಿ ಸೌಹಾರ್ದ ಸಂಬಂಧವನ್ನು ಬೆಸೆಯುವ ಮೊಹರಾಂ ಆಚರಣೆಗೆ ಎಲ್ಲೆಡೆ ಸಿದ್ಧತೆ ಪೂರ್ಣಗೊಂಡಿದೆ. ಬೆಂಗಳೂರಿನಲ್ಲಿ ಮೊಹರಾಂ ಆಚರಣೆ ಹಿನ್ನೆಲೆಯಲ್ಲಿ ಬಿಗಿ ಭದ್ರತೆ ಏರ್ಪಡಿಸಲಾಗಿದೆ. ಕೋಲಾರ ಜಿಲ್ಲೆಯಲ್ಲಿ ಹಿಂದೂ ಮುಸ್ಲಿಮರ ಭಾವೈಕ್ಯತೆ ಮೂಡಿಸುವ ಮೊಹರಂ ಆಚರಣೆಯಲ್ಲಿ ಹಿಂದೂ

ಸಮುದಾಯದವರು ಭಾಗವಹಿಸಿ ವಿಜೃಂಭಣೆಯಿಂದ ಆಚರಿಸುತ್ತಿದ್ದಾರೆ. ಹಬ್ಬದ ಅಂಗವಾಗಿ ಮುನ್ನೆಚ್ಚರಿಕೆ ಕ್ರಮವಾಗಿ  ಕೋಲಾರದ ಕ್ಲಾಕ್ ಟವರ್ ನಲ್ಲಿ ಬಿಗಿ ಪೊಲೀಸ್ ಬಂದೋಬಸ್ತ್ ಕೈಗೊಳ್ಳಲಾಗಿದೆ.

><><><><><><><

ಏಳನೇ ವೇತನ ಆಯೋಗದ ಪರಿಷ್ಕೃತ ವೇತನ ಪಾವತಿಗೆ ಅವಶ್ಯವಿರುವ ಹೆಚ್ಚುವರಿ ಅನುದಾನವನ್ನು ಆರ್ಥಿಕ ಇಲಾಖೆಗೆ ಬಿಡುಗಡೆಗೊಳಿಸುವುದು ಸೇರಿದಂತೆ ವಿವಿಧ ಬೇಡಿಕೆಗಳನ್ನು ಈಡೇರಿಸಬೇಕೆಂದು ಒತ್ತಾಯಿಸಿ ಇದೇ ೮ ರಿಂದ ರಾಜ್ಯದ ಎಲ್ಲ  ಮಹಾನಗರ ಪಾಲಿಕೆ ನೌಕರರಿಂದ ಬೆಂಗಳೂರಿನ ಸ್ವತಂತ್ರ ಉದ್ಯಾನವನದಲ್ಲಿ ಅನಿರ್ದಿಷ್ಟ ಅವಧಿಯ ಮುಷ್ಕರ ಹಮ್ಮಿಕೊಳ್ಳಲಾಗಿದೆ. ಸುದ್ದಿಗಾರರೊಂದಿಗೆ ಮಾತನಾಡಿದ ದಾವಣಗೆರೆ ಮಹಾನಗರ ಪಾಲಿಕೆ ನೌಕರರ ಸಂಘದ ಅಧ್ಯಕ್ಷ ಕೆ.ಎಸ್.ಗೋವಿಂದರಾಜು ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ಸೇರಿದಂತೆ ರಾಜ್ಯದ ಎಲ್ಲ ೧೧ ಮಹಾನಗರ ಪಾಲಿಕೆಗಳ ವ್ಯಾಪ್ತಿಯಲ್ಲಿ ಸ್ವಚ್ಚತೆ, ನೀರು ಸರಬರಾಜು ಸ್ಥಗಿತಗೊಳಿಸಿ ಈ ಮುಷ್ಕರಕ್ಕೆ ಕರೆ ನೀಡಲಾಗಿದೆ ಎಂದು ಸ್ಪಷ್ಟಪಡಿಸಿದ್ದಾರೆ. ೨೦೨೨-೨೩ ಮತ್ತು ೨೦೨೩-೨೪ ನೇ ಸಾಲಿನಲ್ಲಿ ನೇಮಕಾತಿ ಮಾಡಲಾದ ಪೌರಕಾರ್ಮಿಕರ ವೇತನವನ್ನು ಸ್ವಂತ ಸಂಪನ್ಮೂಲಗಳಿಂದ ಭರಿಸಲು ಹೊರಡಿಸಲಾಗಿರುವ ಆದೇಶವನ್ನು ಹಿಂಪಡೆಯಬೇಕು ಸದರಿ ಪೌರಕಾರ್ಮಿಕರ ವೇತನ ಪಾವತಿಗೆ ಅವಶ್ಯವಿರುವ ಸಂಪೂರ್ಣ ಅನುದಾನವನ್ನು ಎಸ್ಎಫ್ಸಿ ನಿಧಿಯಿಂದ ಬಿಡುಗಡೆಗೊಳಿಸಬೇಕೆಂದು ಆಗ್ರಹಿಸಿ ಈ ಮುಷ್ಕರ ಹಮ್ಮಿಕೊಳ್ಳಲಾಗಿದೆ ಎಂದು ಹೇಳಿದ್ದಾರೆ.

><><><><><><><

ಕೋಲಾರ ಜಿಲ್ಲಾ ಹಾಲು ಒಕ್ಕೂಟದಲ್ಲಿ ಪ್ರತಿದಿನ ೧೦ ಲಕ್ಷಕ್ಕೆ ಏರಿಸುವುದು ನೂತನ ಆಡಳಿತ ಮಂಡಳಿಯ ಗುರಿಯಾಗಿದೆ ಎಂದು ಕೋಲಾರ ಹಾಲು ಒಕ್ಕೂಟದ ನೂತನ ಅಧ್ಯಕ್ಷ ಹಾಗೂ ಮಾಲೂರು ಶಾಸಕ ಕೆ.ವೈ. ನಂಜೇಗೌಡ ತಿಳಿಸಿದ್ದಾರೆ. ಕೋಲಾರ ಜಿಲ್ಲಾ ಹಾಲು ಒಕ್ಕೂಟದ ಅಧ್ಯಕ್ಷರಾಗಿ ಅವಿರೋಧ ಆಯ್ಕೆಯಾದ ಬಳಿಕ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಕೋಲಾರ - ಚಿಕ್ಕಬಳ್ಳಾಪುರ ಅವಿಭಜಿತ ಜಿಲ್ಲೆಯ ಹಾಲು ಒಕ್ಕೂಟದಲ್ಲಿ ಪ್ರತಿದಿನದ ಸಂಗ್ರಹಣೆ ಪ್ರಮಾಣ ೧೦ ಲಕ್ಷ ಲೀಟರುಗಳಿಗೆ ಏರಿತ್ತು. ಒಕ್ಕೂಟದ ವಿಭಜನೆ ನಂತರ ಕೋಲಾರದಲ್ಲಿ ಸಂಗ್ರಹಣೆ ಪ್ರಮಾಣ ಸರಿದೂಗಿಸಲು ಒಂದು ವರ್ಷದ ಕ್ರಿಯಾಯೋಜನೆ ರೂಪಿಸಲಾಗುವುದು ಎಂದು ತಿಳಿಸಿದ್ದಾರೆ.

><><><><><><><